ಬಾಗಲ ಕೋಟೆ ತಾಲ್ಲೂಕಿನಲ್ಲಿ ಮಾಧ್ಯಮಿಕ ಶಾಲೆಗಳ ಕೊರತೆ

1024 (1418)

ಶ್ರೀ **ಪೂಜಾರಿ ಪ್ರಹ್ಲಾದ್ ಹನುಮಂತಪ್ಪ** (ಬಾಗಲಕೋಟೆ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಬಾಗಲಕೋಟೆ ತಾಲ್ಲೂಕಿನಲ್ಲಿ 5 ಕಡೆ ಮಾಧ್ಯಮಿಕ ಶಾಲೆಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಪ್ರಸಕ್ತ ವರ್ಷ ಸರ್ಕಾರ ಅಲ್ಲಿ ಮಾಧ್ಯಮಿಕ ಶಾಲೆಗಳನ್ನು ಮಂಜೂರು ಮಾಡಲು ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

ಶ್ರೀ.**ಹೆಚ್.ಜಿ. ಗೋವಿಂದಗೌಡ** (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು.) :

ಅ) ಹೌದು.

ಆ) 1999-2000ನೇ ಸಾಲಿಗೆ ಹೊಸದಾಗಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲು ಸರ್ಕಾರವು ನಿರ್ಧಾರ ತೆಗೆದುಕೊಂಡಲ್ಲಿ ಈ ಬಗ್ಗೆ ಪರಿಶೀಲಿಸಲಾಗುವುದು.

ಬಾಗಲಕೋಟೆ ನಗರದಲ್ಲಿ ಮರಾಠ ಶಾಲೆಯ ಅವಶ್ಯಕತೆ

1025 (1420)

ಶ್ರೀ **ಪೂಜಾರಿ ಪ್ರಹ್ಲಾದ್ ಹನುಮಂತಪ್ಪ** (ಬಾಗಲ ಕೋಟೆ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬಾಗಲಕೋಟೆ ನಗರದಲ್ಲಿ ಮರಾಠಿ ಮಾಧ್ಯಮದ ಶಾಲೆಯ ಅವಶ್ಯಕತೆ ಇರುವುದು ಸರಕಾರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಸರಕಾರ ಮರಾಠಿ ಮಾಧ್ಯಮದ ಪ್ರೌಢಶಾಲೆಯನ್ನು ತೆರೆಯಲು ತೆಗೆದುಕೊಂಡ ಕ್ರಮಗಳು ಯಾವುವು?

ಶ್ರೀ **ಹೆಚ್.ಜಿ. ಗೋವಿಂದಗೌಡ** (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಬಂದಿದೆ.

ಆ) 1999-2000ನೇ ಸಾಲಿಗೆ ಹೊಸದಾಗಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲು ಸರ್ಕಾರವು ನಿರ್ಧಾರ ತೆಗೆದುಕೊಂಡಲ್ಲಿ ಈ ಬಗ್ಗೆ ಪರಿಶೀಲಿಸಲಾಗುವುದು.

ಪದವಿ ಪೂರ್ವ ವೃತ್ತಿ ಶಿಕ್ಷಕರ ಖಾಯಂ

1026 (1435)

ಶ್ರೀ **ಪೂಜಾರಿ ಪ್ರಹ್ಲಾದ ಹನುಮಂತಪ್ಪ** (ಬಾಗಲಕೋಟೆ) : ಮಾನ್ಯ ವಯಸ್ಕರ ಶಿಕ್ಷಣ ಹಾಗೂ ಗ್ರಂಥಾಲಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ